154 ಶಿ 6 ನಿ-72-(10)
LIKR
-1209

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅಡಗೂರು ಹೆಚ್ ವಿಶ್ವನಾಥ್ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

---

**ಸೂಚನೆ:**

ರಾಜ್ಯ ಸರ್ಕಾರಗಳು ತನ್ನ ಅಧಿಕಾರರೂಢ, ತನ್ನ ಸರ್ಕಾರದ ಮೇಲಿನ ಆರೋಪಗಳು ಅಥವಾ ಹಿಂದಿನ ಸರ್ಕಾರದ ಅವಧಿಯಲ್ಲಿ ನಡೆದ ಭ್ರಷ್ಟಾಚಾರಗಳು ಅಥವಾ ಬಗೆಹರಿಸಲಾದ ಸಾರ್ವಜನಿಕ ಸಮಸ್ಯೆಗಳ ಬಗ್ಗೆ, ಅಧ್ಯಯನ/ತನಿಖೆ ನಡೆಸಲು ಹಲವಾರು ಆಯೋಗಗಳು/ ಸಮಿತಿಗಳನ್ನು {ಮಾನ್ಯ ನ್ಯಾಯಮೂರ್ತಿ ಕೆಂಪಣ್ಣ ಆಯೋಗ (ಅರ್ಕಾವತಿ ಬಡಾವಣೆ, ರಿಡೋ ಬೆಂಗಳೂರು), ಮಾನ್ಯ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗ (ಶೇ 40 ಕಮೀಷನ್ ಭ್ರಷ್ಟಾಚಾರದ ಬಗ್ಗೆ), ಇತ್ತೀಚಿನ ಮಾನ್ಯ ನ್ಯಾಯಮೂರ್ತಿ ದೇಸಾಯಿ ಆಯೋಗ (ಮೈಸೂರು ಮುಡಾ ಹಗರಣ) ಮತ್ತು ಮಾನ್ಯ ನ್ಯಾಯಮೂರ್ತಿ ಮೈಕಲ್ ಡಿ.ಕುನ್ಹಾ ಆಯೋಗ (ಕೋವಿಡ್ ಸಂದರ್ಭದಲ್ಲಿ ಸರ್ಕಾರ ನಡೆಸಿದ ಭ್ರಷ್ಟಾಚಾರದ ಬಗ್ಗೆ)} ರಚಿಸಿ ನಿರ್ದಿಷ್ಟ ಕಾಲಾವಧಿಯೊಳಗೆ ತನಿಖಾ ವರದಿಗಳನ್ನು ಅಗತ್ಯಕ್ರಮಕ್ಕಾಗಿ ಸಲ್ಲಿಸಲು ಆಯೋಗಗಳನ್ನು ರಚನೆ ಮಾಡುತ್ತಿರುವುದು ಸರಿಯಷ್ಟೆ, ಸದರಿ ಆಯೋಗಗಳು/ ಸಮಿತಿಗಳು ಸಲ್ಲಿಸಿರುವ ವರದಿ/ ಶಿಫಾರಸ್ಸುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮ ಇತ್ಯಾದಿ ವಿಷಯಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

**ನ್ಯಾಯಮೂರ್ತಿ ಕೆಂಪಣ್ಣ ಆಯೋಗ -** ಅರ್ಕಾವತಿ ಬಡಾವಣೆಗೆ ರಚನೆಗಾಗಿ ಭೂಸ್ವಾಧೀನದಿಂದ ಕೈಬಿಟ್ಟಿರುವ / ಹೊರತುಪಡಿಸಿರುವ ಜಮೀನಿಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ, ವರದಿ ನೀಡಲು ಸರ್ಕಾರದ ಅಧಿಸೂಚನೆ ಸಂಖ್ಯೆ:UDD 619 MNX 2014, ದಿನಾಂಕ:16.08.2014 ರಲ್ಲಿ ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎಸ್ ಕೆಂಪಣ್ಣ ವಿಚಾರಣಾ ಆಯೋಗವನ್ನು ರಚಿಸಲಾಗಿರುತ್ತದೆ.

ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್.ಎಸ್. ಕೆಂಪಣ್ಣ ವಿಚಾರಣಾ ಆಯೋಗವು ದಿನಾಂಕ 23.08.2017 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಪ್ರಸ್ತುತ ಸದರಿ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗ -** ರಾಜ್ಯದಲ್ಲಿ ಪ್ರಮುಖ ಕಾಮಗಾರಿಗಳನ್ನು ನಡೆಸುವ ಇಲಾಖೆಗಳಲ್ಲಿ ಭ್ರಷ್ಟಾಚಾರ ನಡೆದಿರುವ ಕುರಿತು ವಿಚಾರಣೆಯನ್ನು ನಡೆಸಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಹೆಚ್. ಎನ್. ನಾಗಮೋಹನ್ ದಾಸ್ ರವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಕ ಮಾಡಿ ದಿನಾಂಕ: 25-08-2023 ರಂದು ಅಧಿಸೂಚನೆ ಹೊರಡಿಸಲಾಗಿತ್ತು. ವಿಚಾರಣಾಧಿಕಾರಿಯವರ ಕೋರಿಕೆಯ ಮೇರೆಗೆ ಸದರಿ ವಿಚಾರಣಾ ಆಯೋಗದ ಅವಧಿಯನ್ನು ದಿನಾಂಕ:31-03-2025 ರವರೆಗೆ ವಿಸ್ತರಿಸಲಾಗಿರುತ್ತದೆ (ಅಧಿಸೂಚನೆಯನ್ನು ಅನುಬಂಧ -1 ರಲ್ಲಿರಿಸಿದೆ).

**ನ್ಯಾಯಮೂರ್ತಿ ದೇಸಾಯಿ ಆಯೋಗ –** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿ ಶ್ರೀ

ಪಿ.ಎನ್. ದೇಸಾಯಿ ರವರ ನೇತೃತ್ವದಲ್ಲಿ ಏಕ ಸದಸ್ಯ ವಿಚಾರಣಾ ಆಯೋಗವನ್ನು ರಚಿಸಿದ್ದು, ಮಾನ್ಯ ಆಯೋಗದಲ್ಲಿ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ (ಅಧಿಸೂಚನೆಯ ಪ್ರತಿ ಅನುಬಂಧ-2 ರಲ್ಲಿರಿಸಿದೆ)

**ನ್ಯಾಯಮೂರ್ತಿ ಮೈಕಲ್ ಡಿ.ಕುನ್ಹಾ ಆಯೋಗ** –ಕೋವಿಡ್-19 ಸಾಂಕ್ರಾಮಿಕ ರೋಗದ ನಿವಾರಣೆ ಹಾಗೂ ತಡೆಗಟ್ಟುವಿಕೆ ಸಂಬಂಧವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಇತರೆ ಇಲಾಖೆಗಳು ಹಾಗೂ ಈ ಇಲಾಖೆಗಳ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಂಸ್ಥೆಗಳಲ್ಲಿ ಔಷಧಿ, ಉಪಕರಣಗಳು ಹಾಗೂ ಸಾಮಗ್ರಿಗಳ ಖರೀದಿ, ಆಮ್ಲಜನಕ ನಿರ್ವಹಣೆ, ಆಮ್ಲಜನಕ ಕೊರತೆಯಿಂದ ಉಂಟಾದ ಸಾವುಗಳು ಹಾಗು ಇತರೆ ವಿಷಯಗಳ ಕುರಿತು 2021ರ ಜುಲೈ-ಆಗಸ್ಟ್ ನಲ್ಲಿ ನಡೆದ ಸಾರ್ವಜನಿಕ ಲೆಕ್ಕ ಪತ್ರ ಸಮಿತಿಯು ನೀಡಿರುವ ವರದಿಯಲ್ಲಿನ ಗಂಭೀರ ಆರೋಪಗಳ ಬಗ್ಗೆ ತನಿಖೆಯನ್ನು ನಡೆಸಲು COMMISSION OF INQUIRY ACT 1952ರ ನಿಯಮ 3ರ ಉಪ ನಿಯಮ 1ರನ್ವಯ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಗೌರವಾನ್ವಿತ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಜಾನ್ ಮೈಕೆಲ್ ಡಿ. ಕುನ್ಹಾ ಇವರ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ನೇಮಿಸಲಾಗಿರುತ್ತದೆ. ಸದರಿ ಆಯೋಗದ ಶಿಫಾರಸ್ಸುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.

1. ಸಚಿವ ಸಂಪುಟದ ನಿರ್ಣಯದನ್ವಯ ಅಧಿಕೃತ ಜ್ಞಾಪನ ಸಂಖ್ಯೆ:ಸಸಂಶಾ 20 ಸಿಎಸ್‌ಸಿ 2024, ದಿನಾಂಕ:15.10.2024 ರಂದು ಮಾನ್ಯ ಉಪ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿರುತ್ತದೆ.
2. ಸಚಿವ ಸಂಪುಟದ ನಿರ್ಣಯದನ್ವಯ ಸರ್ಕಾರ ಆದೇಶ ಸಂಖ್ಯೆ:ಆಕುಕ 15 ಪಿಆರ್‌ಎಸ್ 2024, ದಿನಾಂಕ:21.10.2024 ರಲ್ಲಿ ಜಸ್ಟಿಸ್ ಕುನ್ಹಾರವರ ವಿಚಾರಣಾ ಆಯೋಗವು ಸಲ್ಲಿಸಿರುವ ಭಾಗಶಃ ವರದಿಯ ಮೇಲೆ ಕ್ರಮ ಕೈಗೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.
3. ಆದೇಶ ಸಂಖ್ಯೆ:ಸಿಆಸುಇ 331 ಎಸ್‌ಎಎಸ್ 2024, ದಿನಾಂಕ:30.10.2024ರಲ್ಲಿ ಜಸ್ಟಿಸ್ ಕುನ್ಹಾರವರ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ.
4. ದಿನಾಂಕ:28.10.2024 ಮತ್ತು 07.12.2024 ರಂದು ಮಾನ್ಯ ಉಪ ಮುಖ್ಯ ಮತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಸಮಿತಿಯನ್ನು ನಡೆಸಲಾಗಿದೆ.
5. ದಿನಾಂಕ:28.10.2024ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ಸಭೆಯನ್ನು(High Level Committee) ನಡೆಸಲಾಗಿದೆ.
6. MD KSMSCL ಇವರನ್ನು ಕೋವಿಡ್ 19 ನಿರ್ವಹಣೆಯ ಸಂಬಂಧ ಔಷಧಿ ಹಾಗೂ ಇತರ ಸಾಮಾಗ್ರಿ/ ಉಪಕರಣಗಳ 274 ಸರಬರಾಜುದಾರರಿಗೆ ಹೆಚ್ಚುವರಿ ಮೊತ್ತದ Recovery ಗಾಗಿ ನೋಟಿಸ್ ಅನ್ನು ನೀಡಿ ಅನುಪಾಲನೆ ಮಾಡಲಾಗುತ್ತಿದೆ.
7. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಆಯೋಗವು ನೀಡಿರುವ ಶಿಫಾರಸ್ಸುಗಳಂತೆ ಕ್ರಮಗಳನ್ನು ಕೈಗೊಳ್ಳುತ್ತಿದೆ. ವೈದ್ಯಕೀಯ ಶಿಕ್ಷಣ ಇಲಾಖೆ, ನಗರಾಭಿವೃದ್ಧಿ ಇಲಾಖೆಗಳು ಸಹ ಕ್ರಮಗಳನ್ನು ಕೈಗೊಳ್ಳುತ್ತಿವೆ.

ಸಂಖ್ಯೆ: ನಅಇ 361 ಸಮನ್ವಯ 2024.

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿಗಳು